**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ ಹೊಳಲ್ಕೆರೆ.**

**ಸಿ.ಸಿ. 484/2023**

| | | | |
|---|---|---|---|
| ಸಾಕ್ಷಿದಾರರ ಹೆಸರು | : | ಮಂಜುನಾಥ | ಪ್ರಾ.ಸಾಃ 3 |
| ತಂದೆಯ/ಗಂಡನ ಹೆಸರು | : | ಮಹಲಿಂಗಪ್ಪ | ಚಾ.ಸಾಃ 3 |
| ವಯಸ್ಸು | : | 45 ವರ್ಷ | |
| ಕೆಲಸ | : | ವ್ಯವಸಾಯ | ಸಾ ಪ್ರ ಬೋ |
| ವಾಸ | : | ಆರ್.ಗೊಲ್ಲರಹಳ್ಳಿ ಕ್ಯಾಂಪ್ ಗ್ರಾಮ | ದಿಃ19.02.2026 |

**ಮುಖ್ಯ ವಿಚಾರಣೆ ಎ.ಪಿ.ಪಿ.ಯವರಿಂದಃ**

ಚಾಸಾ.1 ಮತ್ತು 2 ರವರು ಗೊತ್ತು. ನ್ಯಾಯಾಲಯದ ಮುಂದಿರುವ ಆರೋಪಿತರು ಗೊತ್ತು.

2. ಸಾಕ್ಷಿ ನಿಪಿ.2 ರಲ್ಲಿನ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ.2(ಸಿ) ಎಂದು ಗುರುತಿಸಲಾಯಿತು. ನಿಪಿ.2 ಕ್ಕೆ 2023 ನೇ ಸಾಲಿನಲ್ಲಿ ಮದ್ಯಾಹ್ನ 12.30 ರ ಸಮಯದಲ್ಲಿ ಪೊಲೀಸರು ಬಂದಾಗ ಮಾಡಿದ್ದೆನು. ದಾರಿಯ ವಿಚಾರವಾಗಿ ಗಲಾಟೆ ಮಾಡಿಕೊಂಡಿದ್ದ ಬಗ್ಗೆ ಸಹಿ ಮಾಡಿರುತ್ತೇನೆ. ಪೊಲೀಸರು ಸ್ಥಳದಲ್ಲಿ ಮಹಜರನ್ನು ಜರುಗಿಸಿದ್ದರು. ಮಹಜರಿನ ಸಮಯದಲ್ಲಿ ಪೊಲೀಸರು ಕಲ್ಲು ಮತ್ತು ಕೋಲನ್ನು ಅಮಾನತ್ತುಪಡಿಸಿಕೊಂಡರು. ಆ ಸಮಯದಲ್ಲಿ ನನ್ನೊಂದಿಗೆ ಚಾಸಾ.2 ರವರು ಇದ್ದರು. ಪೊಲೀಸರಿಗೆ ಸ್ಥಳವನ್ನು ನಾನು ಮತ್ತು ಚಾಸಾ.2 ರವರು ತೋರಿಸಿರುತ್ತೇವೆ. ಚಾಸಾ.2 ರವರು ಸಹ ನಿಪಿ.2 ಕ್ಕೆ ಸಹಿ ಮಾಡಿರುತ್ತಾರೆ. ಸಾಕ್ಷಿ ನಿಪಿ.3 ಮತ್ತು 4 ರ ಛಾಯಾಚಿತ್ರಗಳಲ್ಲಿ ತನ್ನ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ. ಸದರಿ ಛಾಯಾಚಿತ್ರಗಳನ್ನು ಮಹಜರಿನ ಸಮಯದಲ್ಲಿ ತೆಗೆದಿರುತ್ತಾರೆ. ಸಾಕ್ಷಿ ನ್ಯಾಯಾಲಯದ ಮುಂದಿರುವ ಮು.ಮಾ.1 ಮತ್ತು 2 ರ ಕಲ್ಲು ಮತ್ತು ಕೋಲನ್ನು ನೋಡಿ ಗುರುತಿಸಿರುತ್ತಾರೆ.

(ಈ ಹಂತದಲ್ಲಿ ಸಾಕ್ಷಿಯು ಭಾಗಶಃ ಪ್ರತಿಕೂಲ ಸಾಕ್ಷಿ ನುಡಿಯುತ್ತಿದ್ದಾರೆ. ಮಾನ್ಯ ಎ.ಪಿ.ಪಿ.ಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು)

**ಪಾಟೀ ಸವಾಲು ಎ.ಪಿ.ಪಿ.ಯವರಿಂದಃ**

3. ಮಹಜರನ್ನು ದಿನಾಂಕ 08.08.2023 ರಂದು ಮದ್ಯಾಹ್ನ 12 ರಿಂದ 1 ಗಂಟೆಯವರೆಗೆ ಜರುಗಿಸಿರುತ್ತಾರೆ ಎಂದರೆ ಸರಿ. ಮಹಜರಿನ ಸಮಯದಲ್ಲಿ ಕಚ್ಚಾ ನಕ್ಷೆಯನ್ನು ತಯಾರಿಸಿರುತ್ತಾರೆ ಎಂದರೆ ಸರಿ. ಸದರಿ ಸಮಯದಲ್ಲಿ ನನ್ನೊಂದಿಗೆ ಚಾಸಾ.1 ರವರು ಸಹ ಇದ್ದರು ಎಂದರೆ ಸರಿ. ಚಾಸಾ.1 ರವರು ಸ್ಥಳ ತೋರಿಸಿದ ಮೇರೆಗೆ ಮಹಜರಿನ ಕ್ರಮವನ್ನು ಜರುಗಿಸಿರುತ್ತಾರೆ ಎಂದರೆ ಸರಿ. ಮಹಜರಿಗೆ ನನ್ನೊಂದಿಗೆ ಚಾಸಾ.1 ರವರು ಸಹ ಸಹಿ ಮಾಡಿರುತ್ತಾರೆ ಎಂದರೆ ಸರಿ.

**ಪಾಟೀ ಸವಾಲುಃ ಆರೋಪಿತರ ಪರ ಶ್ರೀ ಜಿ.ಎಸ್.ಎಸ್. ವಕೀಲರಿಂದ**

4. ನಮ್ಮ ಸ್ವಂತ ಊರು ಗೊಲ್ಲರಹಳ್ಳಿ ಕ್ಯಾಂಪ್. ಮಹಜರನ್ನು ಜರುಗಿಸುವಾಗ ನಾನು ಮತ್ತು ಚಾಸಾ.2 ರವರು ಸ್ಥಳ ತೋರಿಸಿದ್ದು, ಊರಿನ ಇತರೆ ಗ್ರಾಮಸ್ಥರು ಇರಲಿಲ್ಲ. ಪೊಲೀಸರು ಸ್ಥಳದಲ್ಲಿ ರಸ್ತೆಯ ಕುರಿತು ಅಳತೆ ಮಾಡಿಲ್ಲ. ಕಚ್ಚಾ ನಕ್ಷೆಯನ್ನು ಠಾಣೆಯಲ್ಲಿ ತಯಾರಿಸಿರುತ್ತಾರೆ ಎಂದರೆ ಸರಿಯಲ್ಲ. ನಿಪಿ.2 ರ ಮಹಜರನ್ನು ಪೊಲೀಸರು ಓದಿ ಹೇಳಿರುತ್ತಾರೆ. ಮಹಜರನ್ನು ಮದ್ಯಾಹ್ನ 12.30 ರಿಂದ 1.30 ರವರೆಗೆ ಜರುಗಿಸಿರುತ್ತಾರೆ. ಮಹಜರಿನ ಸ್ಥಳದ ಚೆಕ್ಕುಬಂದಿ ಪೂರ್ವಕ್ಕೆ ಖಾಲಿ ಜಾಗ, ಪಶ್ಚಿಮಕ್ಕೆ ಜಮೀನು, ಉತ್ತರಕ್ಕೆ ದಾರಿ, ದಕ್ಷಿಣಕ್ಕೆ ದಾರಿ ಇದೆ. ಮು./ಮಾ.1 ಮತ್ತು 2 ರ ಕಲ್ಲು ಮತ್ತು ದೊಣ್ಣೆ ಎಲ್ಲಾ ಕಡೆ ಸಿಗುತ್ತವೆ ಎಂದರೆ ಸರಿ. ಮಹಜರಿನ ಸಮಯದಲ್ಲಿ ನಾನು ಉಪಸ್ಥಿತನಿಲ್ಲದೇ ಇದ್ದರೂ ಸಹ, ಠಾಣೆಯಲ್ಲಿ ನಿಪಿ.2 ಕ್ಕೆ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣೆಯಲ್ಲಿನ ಎಲ್ಲಾ ಅಂಶಗಳು ಸುಳ್ಳಿನಿಂದ ಕೂಡಿರುತ್ತವೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

(ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ. ಹೇ. ಕೇ. ಸರಿಯಿದೆ.

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ಹೊಳಲ್ಕೆರೆ